# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 959 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 14-03-2025 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ದೇವದಾಸಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ದೇವದಾಸಿಯರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು; | ಸಮೀಕ್ಷೆಯಲ್ಲಿ ಗುರುತಿಸಿರುವಂತೆ ರಾಜ್ಯದಲ್ಲಿರುವ ಮಾಜಿ ದೇವದಾಸಿಯರ ಸಂಖ್ಯೆ 46,660.<br><br>ಜಿಲ್ಲಾವಾರು ವಿವರವನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ.<br><br>ದೇವದಾಸಿಯರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳು:-<br><br>• ಮಾಸಾಶನ ಯೋಜನೆ: 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ಪ್ರತಿ ಮಾಹೆ ರೂ.2000/-ಗಳಂತೆ ಮಾಶಾಸನ ನೀಡಲಾಗುತ್ತಿದೆ.<br>• ಆರ್ಥಿಕ ಸಹಾಯ: ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳಲು ಈ ಯೋಜನೆಯಲ್ಲಿ ಪ್ರತಿ ಫಲಾನುಭವಿಗೆ ತಲಾ ರೂ.30,000/-ಗಳಂತೆ ಸಹಾಯಧನವನ್ನು ನೀಡಲಾಗುತ್ತಿದೆ.<br>• ಮಾಜಿ ದೇವದಾಸಿ ವಸತಿ ಯೋಜನೆ : ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ಈ ಯೋಜನೆಯಡಿ ನಿವೇಶನ ಹೊಂದಿರುವ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಪ್ರದೇಶಕ್ಕೆ ಘಟಕ ವೆಚ್ಚ ರೂ.1.75 ಲಕ್ಷ ಹಾಗೂ ನಗರ ಪ್ರದೇಶಕ್ಕೆ ಘಟಕ ವೆಚ್ಚ ರೂ.2.00 ಲಕ್ಷಗಳನ್ನು ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಸೌಲಭ್ಯವನ್ನು ಕಲ್ಪಿಸಿಕೊಡಲಾಗುತ್ತದೆ.<br>• ವಿಶೇಷ ಪ್ಯಾಕೇಜ್ ಯೋಜನೆ :<br>ಮಾಜಿ ದೇವದಾಸಿ ಮಹಿಳೆಯರ ಸಾಮಾಜಿಕ ಮತ್ತು ಆರ್ಥಿಕ ಸುಧಾರಣೆಗಾಗಿ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ಈ ಕೆಳಗಿನಂತೆ ವಿಶೇಷ ಪ್ಯಾಕೇಜ್ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ:<br>○ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ 40 ರಿಂದ 55 ವರ್ಷದೊಳಗಿನ ಮಾಜಿ ದೇವದಾಸಿ ಮಹಿಳೆಯರ |

| | | |
|---|---|---|
| | | ಗುಂಪು ಚಟುವಟಿಕೆಗಾಗಿ ರೂ 10.00 ಲಕ್ಷಗಳಿಂದ ರೂ. 20.00 ಲಕ್ಷಗಳವರೆಗೆ ಬಡ್ಡಿರಹಿತ ಸಾಲವನ್ನು ನೀಡಲು ಉದ್ದೇಶಿಸಿದೆ.<br>○ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರ 18 ವರ್ಷ ಮೇಲ್ಪಟ್ಟ ಅವಿವಾಹಿತ ಹೆಣ್ಣುಮಕ್ಕಳಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.5.00 ಲಕ್ಷದಿಂದ ರೂ.10.00 ಲಕ್ಷಗಳವರೆಗೆ ಬಡ್ಡಿರಹಿತ ಸಾಲವನ್ನು ನೀಡಲು ಉದ್ದೇಶಿಸಿದೆ.<br>○ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕಾಗಿ ಸಹಾಯಧನವನ್ನು ನೀಡಲು ಉದ್ದೇಶಿಸಿದೆ. |
| ಆ) | ದೇವದಾಸಿಯರ ಬೇಡಿಕೆಗಳೇನು: ದೇವದಾಸಿ ಮಹಿಳೆಯರ ಸ್ಥಿತಿಗತಿ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸುವ ಬೇಡಿಕೆ ಕುರಿತು ಸರ್ಕಾರದ ನಿಲುವೇನು; ಸಮೀಕ್ಷೆ ನಡೆಸಲು ಸಮಿತಿ ರಚಿಸಲಾಗಿದೆಯೇ; ಸಮಿತಿ ತನ್ನ ವರದಿಯನ್ನು ಸಲ್ಲಿಸಿದೆಯೇ; | ಕರ್ನಾಟಕ ರಾಜ್ಯದಲ್ಲಿ 1993-94 ಮತ್ತು 2007-08 ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಒಟ್ಟು 46,660 ದೇವದಾಸಿಯರನ್ನು ಗುರುತಿಸಲಾಗಿದ್ದು, ಸಮೀಕ್ಷೆಯಿಂದ ಹೊರಗುಳಿದ ಮಾಜಿ ದೇವದಾಸಿ ಮಹಿಳೆಯರನ್ನು ಸಮೀಕ್ಷೆಯೊಳಗಡೆ ಪರಿಗಣಿಸುವುದು ದೇವದಾಸಿಯರ ಪ್ರಮುಖ ಬೇಡಿಕೆಯಾಗಿರುತ್ತದೆ.<br><br>ದೇವದಾಸಿಯರ ಮರು ಸಮೀಕ್ಷೆ ನಡೆಸಲು ಈ ಕೆಳಕಂಡ ಸಮಿತಿಗಳನ್ನು ರಚಿಸಲಾಗಿರುತ್ತದೆ:<br>1. ಆಂತರಿಕ ಸಮಿತಿ<br>2. ರಾಜ್ಯ ಮಟ್ಟದ ಸಮಿತಿ (ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಸಮಿತಿ)<br>3. ಜಿಲ್ಲಾ ಮಟ್ಟದಲ್ಲಿ ಮೇಲ್ವಿಚಾರಣೆ ಹಾಗೂ ಮೌಲ್ಯಮಾಪನ ಸಮಿತಿ |
| ಇ) | ವರದಿಯಲ್ಲಿ ಪ್ರಸ್ತಾಪಿಸಿರುವ ಅಂಶಗಳೇನು; ದೇವದಾಸಿಯರ ಸಮಸ್ಯೆ ಮತ್ತು ಪುನರ್ವಸತಿ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಯಾವ ಯಾವ ಯೋಜನೆ/ ಕಾರ್ಯಕ್ರಮಗಳನ್ನು ರೂಪಿಸಿದೆ? | ದೇವದಾಸಿಯರ ಮರು ಸಮೀಕ್ಷೆ ಕಾರ್ಯ ಅನುಷ್ಠಾನದ ಹಂತದಲ್ಲಿದೆ.<br><br>ದೇವದಾಸಿಯರ ಸಮಸ್ಯೆ ಮತ್ತು ಪುನರ್ವಸತಿ ಕುರಿತು ಸರ್ಕಾರ ಕೈಗೊಂಡಿರುವ ಯೋಜನೆ/ ಕಾರ್ಯಕ್ರಮಗಳು/ ಸೌಲಭ್ಯಗಳ ವಿವರಗಳನ್ನು ಉಪ ಪ್ರಶ್ನೆ (ಅ)ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ:ಮಮಇ 21 ಮಅನಿ 2025

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಸಚಿವರು

# ಅನುಬಂಧ

**1993-94 ಮತ್ತು 2007-08ನೇ ಸಾಲುಗಳಲ್ಲಿ ನಡೆಸಿದ ಸಮೀಕ್ಷೆಯ ಪ್ರಕಾರ ಗುರುತಿಸಲಾದ ಮಾಜಿ ದೇವದಾಸಿಯರ ಜಿಲ್ಲಾವಾರು ವಿವರ**

| ಕ್ರ.ಸಂ | ಜಿಲ್ಲೆಯ ಹೆಸರು | ಮಾಜಿ ದೇವದಾಸಿ ಮಹಿಳೆಯರ ಸಂಖ್ಯೆ |
|---|---|---|
| 1 | ಬೆಳಗಾವಿ | 4724 |
| 2 | ಬಾಗಲಕೋಟೆ | 7827 |
| 3 | ವಿಜಯಪುರ | 4103 |
| 4 | ಹಾವೇರಿ | 990 |
| 5 | ಧಾರವಾಡ | 763 |
| 6 | ಗದಗ | 2900 |
| 7 | ಚಿತ್ರದುರ್ಗ | 406 |
| 8 | ದಾವಣಗೆರೆ | 1610 |
| 9 | ಶಿವಮೊಗ್ಗ | 24 |
| 10 | ರಾಯಚೂರು | 3949 |
| 11 | ಕೊಪ್ಪಳ | 6035 |
| 12 | ಬಳ್ಳಾರಿ/ವಿಜಯನಗರ | 10715 |
| 13 | ಕಲಬುರಗಿ | 1445 |
| 14 | ಯಾದಗಿರಿ | 1169 |
| | ಒಟ್ಟು | **46660** |

ಕಡತ ಸಂಖ್ಯೆ:ಮಮಇ 21 ಮಅನಿ 2025